# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 544 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಶಶೀಲ್ ಜಿ ನಮೋಶಿ |
| ಉತ್ತರಿಸಬೇಕಾದ ದಿನಾಂಕ | 08.12.2023 |
| ಉತ್ತರಿಸುವ ಸಚಿವರು | ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2009-10 ನೇ ಸಾಲಿನಲ್ಲಿ ಪ್ರಾರಂಭಿಸಲಾದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯಲ್ಲಿ 6-12 ನೇ ತರಗತಿಗೆ ಪ್ರವೇಶಾತಿಗಾಗಿ ಅವಕಾಶ ಕಲ್ಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು: (ವಿವರ ನೀಡುವುದು) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳನ್ನು 2009-10 ನೇ ಸಾಲಿನಲ್ಲಿ 6 ರಿಂದ 12ನೇ ತರಗತಿಯವರೆಗೆ ಪ್ರಾರಂಭಿಸಲು ಮಂಜೂರು ಮಾಡಿ ಆದೇಶಿಸಲಾಗಿದೆ. ಸದರಿ ವಸತಿ ಶಾಲೆಗಳಲ್ಲಿ 6-10ನೇ ತರಗತಿಯವರೆಗೆ ಶಾಲಾ ವಿಭಾಗಕ್ಕೆ ಮಾತ್ರ ಹುದ್ದೆಗಳು ಮಂಜೂರಾಗಿರುವುದರಿಂದ 6 ರಿಂದ 10ನೇ ತರಗತಿಯವರೆಗೆ ಪ್ರವೇಶಾತಿಗೆ ಅವಕಾಶ ಕಲ್ಪಿಸಲಾಗಿದೆ.<br><br>11 ಮತ್ತು 12ನೇ ತರಗತಿಯ ಕಾಲೇಜು ವಿಭಾಗಕ್ಕೆ ಹುದ್ದೆಗಳು ಮಂಜೂರು ಆಗದಿರುವುದರಿಂದ ತರಗತಿಗಳನ್ನು ಪ್ರಾರಂಭಿಸಿರುವುದಿಲ್ಲ. ಹುದ್ದೆಗಳ ಮಂಜೂರಾತಿ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು, ಪ್ರಸ್ತುತ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದ್ದು, ಸಹಮತಿ ದೊರೆತ ನಂತರ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ 11 ಮತ್ತು 12ನೇ ತರಗತಿಗಳನ್ನು ಪ್ರಾರಂಭಿಸಲು ಮತ್ತು ಪ್ರವೇಶಾತಿ ನೀಡಲು ಕ್ರಮವಹಿಸಲಾಗುವುದು. |
| ಆ) | ಇತ್ತೀಚೆಗೆ ಸರ್ಕಾರವು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ 6-10ನೇ ತರಗತಿವರೆಗೆ ಮಾತ್ರ ಪ್ರವೇಶಾತಿ ಕಲ್ಪಿಸಿದೆ. 11 ಮತ್ತು 12ನೇ ತರಗತಿಗೆ ಪ್ರವೇಶ ಕಲ್ಪಿಸದೇ ಇರುವುದರಿಂದ ಹೆಣ್ಣುಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ) | ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ 11 ಮತ್ತು 12 ನೇ ತರಗತಿಗಳನ್ನು ಯಾವ ಕಾಲಮಿತಿಯೊಳಗೆ ಪ್ರವೇಶಾತಿ ಕಲ್ಪಿಸಲಾಗುವುದು?( ಸಂಪೂರ್ಣ ಮಾಹಿತಿ ನೀಡುವುದು). | |

ಸಕಇ-ಎಂಡಿಎಸ್/225/2023

(ಡಾ.ಹೆಚ್.ಸಿ. ಮಹದೇವಪ್ಪ )
ಸಮಾಜ ಕಲ್ಯಾಣ ಸಚಿವರು